ಕರ್ನಾಟಕ ಸರ್ಕಾರ
ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ
ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

**ಸಂಖ್ಯೆ : ವಾಇ : ಉನಿ : ಸುಮಪ : 2018–19 :** **ದಿನಾಂಕ : 01–10–2018**

# <u>ಪತ್ರಿಕಾ ಪ್ರಕಟಣೆ</u>

ಸಂಖ್ಯೆ:1077/1177

## ರಾಷ್ಟ್ರಪಿತ ಮಹಾತ್ಮಾ ಗಾಂಧಿ 150 ನೇ ಜನ್ಮವರ್ಷಾಚರಣೆ

**ಬೆಂಗಳೂರು, ಅಕ್ಟೋಬರ್ 2, 2018 (ಕರ್ನಾಟಕ ವಾರ್ತೆ)**

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಕೇಂದ್ರ ಕಚೇರಿಯಲ್ಲಿ ಅತ್ಯಂತ ಸುಂದರವಾದ ಗಾಂಧೀ ಅಂಗಳವನ್ನು ನಿರ್ಮಿಸಿದ ಸಂತಸ ತಮಗಿದೆ ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ನಿರ್ದೇಶಕರಾದ ಎನ್.ಆರ್. ವಿಶುಕುಮಾರ್ ಅವರು ಹೇಳಿದರು.

ರಾಷ್ಟ್ರಪಿತ ಮಹಾತ್ಮಾ ಗಾಂಧಿ ಅವರ 150 ನೇ ಜನ್ಮವರ್ಷಾಚರಣೆ ಕಾರ್ಯಕ್ರಮವನ್ನು ಇಂದು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಕೇಂದ್ರ ಕಚೇರಿಯಲ್ಲಿ ಆಚರಿಸಲಾಯಿತು. ಈ ಸಂದರ್ಭದಲ್ಲಿ ಮಾತನಾಡಿದ ಅವರು ಗಾಂಧಿ ತತ್ವಗಳನ್ನು ಸಾರುವ ಉದ್ದೇಶದಿಂದ ಹಾಗೂ ಉತ್ತಮವಾದ ವಾತಾವರಣವನ್ನು ನಿರ್ಮಿಸುವ ಉದ್ದೇಶದಿಂದ ವಾರ್ತಾ ಇಲಾಖೆಯ ಕೇಂದ್ರ ಕಚೇರಿಯ ಆವರಣದಲ್ಲಿ ಮೂರು ವರ್ಷಗಳ ಹಿಂದೆ ಗಾಂಧಿ ಅಂಗಳವನ್ನು ನಿರ್ಮಿಸಲಾಯಿತು.

ಇಲಾಖೆಯ ಗಾಂಧಿ ಅಂಗಳಕ್ಕೆ ನಾಡಿನ ಅನೇಕ ಗಣ್ಯ ವ್ಯಕ್ತಿಗಳು ಭೇಟಿ ನೀಡಿ ಮೆಚ್ಚುಗೆ ವ್ಯಕ್ತಪಡಿಸಿರುವುದು ಅತ್ಯಂತ ಸಂತಸದಾಯಕ ವಿಷಯವಾಗಿದ್ದು ಗಾಂಧೀಜಿ ಅವರ ತತ್ವಗಳು ಸಾರ್ವಕಾಲಿಕ.

ಮಹಾತ್ಮಾ ಗಾಂಧಿ ಅವರು ಅಹಿಂಸಾ ಮಾರ್ಗದ ಮೂಲಕ ತೋರಿದ ಪ್ರತಿಭಟನೆ ಅಸ್ತ್ರ ಇಂದು ವಿಶ್ವಾದ್ಯಂತ ಅತ್ಯುತ್ತಮವಾದ ಮಾರ್ಗವಾಗಿದೆ. ಅದಕ್ಕಾಗಿ ಇಂದು ವಿಶ್ವದಲ್ಲಿ ಅಹಿಂಸಾ ದಿನವನ್ನಾಗಿ ಆಚರಿಸಲಾಗುತ್ತಿದೆ. ಯಾವುದೇ ಸೌಲಭ್ಯವಿಲ್ಲದ ಕಾಲದಲ್ಲಿ

ಭಾರತವನ್ನು ಸುತ್ತಿದ ಮಹಾತ್ಮಾ ಗಾಂಧಿ ಅವರು ಕರ್ನಾಟಕಕ್ಕೆ ಅನೇಕ ಬಾರಿ ಭೇಟಿ ನೀಡಿದ್ದಾರೆ.

ರಾಜ್ಯದ ನಂದಿಬೆಟ್ಟ ಅವರ ನೆಚ್ಚಿನ ಸ್ಥಳವಾಗಿತ್ತು. ಇಂದು ಇಲಾಖೆಯಲ್ಲಿ ನಿರ್ಮಿಸಿರುವ ಗಾಂಧಿ ಅಂಗಳ ಇತರೆ ಇಲಾಖೆಗಳಿಗೆ ಮಾದರಿಯಾಗಿದೆ ಹಾಗೂ ನಮ್ಮ ಇಲಾಖೆಗೆ ಕಳಸವಾಗಿದೆ ಎಂದು ಹೇಳಿದರು.

ರಾಜ್ಯ ಸರ್ಕಾರ ಮಹಾತ್ಮಾ ಗಾಂಧಿ ಅವರ 150 ನೇ ಜನ್ಮ ವರ್ಷಾಚರಣೆ ಪ್ರಯುಕ್ತ ರಾಜ್ಯಾದ್ಯಂತ ಹಮ್ಮಿಕೊಂಡಿರುವ ಗಾಂಧಿ ತತ್ವಗಳನ್ನು ಸಾರುವ ಕಾರ್ಯಕ್ರಮಗಳ ಸಮನ್ವಯ ಇಲಾಖೆಯಾಗಿ ಕಾರ್ಯ ನಿರ್ವಹಿಸುತ್ತಿರುವ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಈ ವರ್ಷಪೂರ್ತಿ ವಿವಿಧ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಿದೆ.

ಇಂದು ನಡೆದ ಕಾರ್ಯಕ್ರಮದಲ್ಲಿ ಇಲಾಖೆಯ ನಿರ್ದೇಶಕರಾದ ಎನ್.ಆರ್. ವಿಶುಕುಮಾರ್ ಅವರು ಮಹಾತ್ಮಾ ಗಾಂಧಿ ಅವರ ಪುತ್ಥಳಿಗೆ ಮಾಲಾರ್ಪಣೆ ಮಾಡುವ ಮೂಲಕ ಚಾಲನೆ ನೀಡಿದರು.

ಇಲಾಖೆಯ ಜಂಟಿ ನಿರ್ದೇಶಕರುಗಳಾದ ಎಂ. ರವಿಕುಮಾರ್, ಎನ್. ಭೃಂಗೀಶ್, ಹೆಚ್.ಬಿ. ದಿನೇಶ್ ಹಾಗೂ ಎ.ಆರ್. ಪ್ರಕಾಶ್ ಅವರು ಮಹಾತ್ಮಾ ಗಾಂಧಿ ಅವರ ತತ್ವಗಳು ಹಾಗೂ ಇಂದಿನ ಕಾಲಮಾನಕ್ಕೆ ಅವುಗಳ ಪ್ರಾಮುಖ್ಯತೆ ಕುರಿತು ಮಾತನಾಡಿದರು.

ಈ ಸಂದರ್ಭದಲ್ಲಿ ಉಪ ನಿರ್ದೇಶಕರಾದ ಬಸವರಾಜ ಕಂಬಿ ಅವರೂ ಸೇರಿದಂತೆ ಇಲಾಖೆಯ ಉನ್ನತಾಧಿಕಾರಿಗಳು ಮತ್ತು ಸಿಬ್ಬಂದಿಗಳು ಭಾಗವಹಿಸಿದ್ದರು.

ಕಾರ್ಯಕ್ರಮದ ಮುಖ್ಯ ಆಕರ್ಷಣೆಯಾಗಿ ಶ್ರೀಮತಿ ಚಂದ್ರಿಕ ಗುರುರಾಜ್ ತಂಡದವರಿಂದ ಗಾಂಧೀಪ್ರಿಯ ಹಾಡುಗಳ ಕಾರ್ಯಕ್ರಮವನ್ನು ನಡೆಸಿಕೊಟ್ಟರು.